ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಸೋಮವಾರ, ದಿನಾಂಕ : 28 ನೇ ಸೆಪ್ಟೆಂಬರ್, 2020

ಬೀದರ್ ಜಿಲ್ಲೆಯ ಖಾಸಗಿ ಶಿಕ್ಷಣ ಸಂಸ್ಥೆಗಳ ವಿರುದ್ಧ ಕ್ರಮದ ಬಗ್ಗೆ

ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು):-

741 (990) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೀದರ್ ಜಿಲ್ಲೆಯಲ್ಲಿ ಅನೇಕ ಶಾಲೆಗಳು ಸರ್ಕಾರದಿಂದ ಷರತ್ತುಬದ್ಧವಾದ ಪರವಾನಗಿ ಪಡೆದು ಯಾವುದೇ ಮೂಲಭೂತ ಸೌಕರ್ಯಗಳಿಲ್ಲದೆ ತಗಡಿನ ಶೆಡ್ಡಿನಲ್ಲಿ ಮಕ್ಕಳಿಗೆ ಪಾಠಬೋಧನೆ ಮಾಡುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಅವುಗಳ ಸಂಖ್ಯೆ ಎಷ್ಟು ; ಅವುಗಳ ವಿರುದ್ಧ ಸರ್ಕಾರ ತೆಗೆದುಕೊಂಡ ಕ್ರಮವೇನು ; (ಆ ಸಂಸ್ಥೆಗಳ ಹೆಸರು ಸಮೇತ ವಿವರ ನೀಡುವುದು)

(ಆ) ಅನಧಿಕೃತವಾಗಿ ನಡೆಯುತ್ತಿರುವ ಶಾಲೆಗಳೆಷ್ಟು ; ಆ ಶಿಕ್ಷಣ ಸಂಸ್ಥೆಗಳ ವಿರುದ್ಧ ಸರ್ಕಾರ ತೆಗೆದುಕೊಂಡ ಕ್ರಮವೇನು ; ಇದಕ್ಕೆ ಹೊಣೆಗಾರರು ಯಾರು ;

(ಇ) ಒಂದು ಶಾಲೆಯ ಪರವಾನಗಿ ಪಡೆದು ಅನೇಕ ಶಾಲೆಗಳನ್ನು ನಡೆಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇಂತಹ ಪರವಾನಿಗೆ ಇಲ್ಲದ ಶಾಲೆಗಳ ವಿರುದ್ಧ ಸರ್ಕಾರ ಕೈಗೊಂಡ ಕ್ರಮಗಳೇನು ; ಕೈಗೊಳ್ಳದಿದ್ದರೆ, ಇದಕ್ಕೆ ಕಾರಣವೇನು ?